ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು
UNIVERSITY OF AGRICULTURAL SCIENCES, BANGALORE
ಐ.ಸಿ.ಎ.ಆರ್. – ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿ, ತಿಪಟೂರು ತಾಲ್ಲೂಕು, ತುಮಕೂರು
ICAR - KRISHI VIGYAN KENDRA, KONEHALLI, TIPTUR TQ, TUMAKURU

# ಕಲ್ಪವೃಕ್ಷ

e - NEWS LETTER /ಇ –ವಾರ್ತಾ ಪತ್ರಿಕೆ

ಸಂಪುಟ: 10 | ಜುಲೈ – ಡಿಸೆಂಬರ್ 2018 | ಸಂಚಿಕೆ: 2

## ಮಾನ್ಯ ಪ್ರಧಾನ ಮಂತ್ರಿಯವರು ದೇಶದ ಮಹಿಳಾ ಸ್ವಸಹಾಯ ಸಂಘದ ಸದಸ್ಯರೊಂದಿಗೆ ನೇರ ಸಂದರ್ಶನ ಹಾಗೂ ತರಬೇತಿ



ಮಾನ್ಯ ಪ್ರಧಾನ ಮಂತ್ರಿಯವರು ದೇಶದ ಮಹಿಳಾ ಸ್ವಸಹಾಯ ಸಂಘದ ಸದಸ್ಯರೊಂದಿಗೆ ನೇರ ಸಂದರ್ಶನ ಜರುಗಿದ ಕಾರ್ಯಕ್ರಮವನ್ನು ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ತಿಪಟೂರು ವತಿಯಿಂದ ದಿನಾಂಕ: 12ನೇ ಜುಲೈ 2018 ರಂದು ಕೇಂದ್ರದಲ್ಲಿ ತಾಲ್ಲೂಕಿನ ಮಹಿಳಾ ಸ್ವಸಹಾಯ ಸಂಘದ ಸದಸ್ಯರಿಗೆ ದೂರದರ್ಶನದ ಮೂಲಕ ನೇರ ಪ್ರಸಾರವನ್ನುಆಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಮಾನ್ಯ ಪ್ರಧಾನ ಮಂತ್ರಿಯವರು ದೇಶದ ವಿವಿದ ರಾಜ್ಯಗಳ ಮಹಿಳಾ ಸ್ವಸಹಾಯ ಸಂಘದ ಸದಸ್ಯರೊಂದಿಗೆ ಸಮಾಲೋಚನೆ ಮಾಡಿದರು ಹಾಗೂ ಸದಸ್ಯರು ಕೈಗೊಂಡಿರುವ ಆದಾಯೋತ್ಪನ್ನ ಚಟುವಟಿಕೆಗಳತ್ತ ಗಮನ ಹರಿಸಿ ಮಹಿಳಾ ಸಭಲೀಕರಣದ ಕುರಿತು ಚರ್ಚೆ ಮಾಡಲಾಯಿತು. ಈ ಕಾರ್ಯಕ್ರಮದ ನಿಮಿತ್ತ ಕೃಷಿ ವಿಜ್ಞಾನ ಕೇಂದ್ರದಲ್ಲಿ ಆಯೋಜಿಸಿದ ನೇರ ಪ್ರಸಾರ ಕಾರ್ಯಕ್ರಮವನ್ನು ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರಾದ ಡಾ. ಗೋವಿಂದ ಗೌಡ ರವರು ಉದ್ಘಾಟಿಸಿ ಇಂತಹ ಕಾರ್ಯಕ್ರಮಗಳು ದೇಶದ ಮಹಿಳೆಯರಲ್ಲಿ ತಂತ್ರಜ್ಞಾನದ ಕುರಿತು ಹೆಚ್ಚು ಅರಿವು ಹಾಗೂ ಸಭಲೀಕರಣದಲ್ಲಿ ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲು ಸಹಕಾರಿಯಾಗುತ್ತವೆಯೆಂದು ತಿಳಿಸಿದರು. ಮುಖ್ಯ ಅತಿಥಿಗಳಾಗಿ ತಿಪಟೂರು ತಾಲ್ಲೂಕು ಶಿಶು ಅಭಿವೃದ್ಧಿ ಅಧಿಕಾರಿಯಾದ ಶ್ರೀ. ಓಂಕಾರಪ್ಪನವರು ಭಾಗವಹಿಸಿ ತಾಲ್ಲೂಕಿನ ಸ್ವಸಹಾಯ ಸಂಘದ ಸದಸ್ಯರ ಅಭಿವೃದ್ದಿ ಹಾಗೂ ಆದಾಯೋತ್ಪನ್ನ ಚಟುವಟಿಕೆಗಳನ್ನು ಕೈಗೊಳ್ಳುವುದರಿಂದ ಸುಸ್ಥಿರ ಜೀವನ ನೆಡೆಸಲು ನೆರವಾಗುತ್ತದೆಯೆಂದು ವಿವರಿಸಿದರು. ಈ ಕಾರ್ಯಕ್ರಮದಲ್ಲಿ ಕೃಷಿ ತಂತ್ರಜ್ಞಾನ ಅಳವಡಿಕೆ ಮತ್ತು ಸಂಶೋಧನಾ ಸಂಸ್ಥೆ (ಅಟಾರಿ), ಬೆಂಗಳೂರಿನ ನಿರ್ದೇಶಕರಾದ ಡಾ. ಚಂದ್ರೇಗೌಡರವರು ಭಾಗವಹಿಸಿ ಸ್ವಸಹಾಯ ಸಂಘದ ಸದಸ್ಯರ ಜೊತೆ ಸಮಾಲೋಚನೆ ನಡೆಸಿದರು ಹಾಗೂ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ದೊರಕುವ ಎಲ್ಲಾ ಸೌಲಭ್ಯಗಳನ್ನು ರೈತರು ಹಾಗೂ ರೈತ ಮಹಿಳೆಯರು ಉಪಯೋಗಿಸಿಕೊಂಡು ಅಧಿಕ ಆದಾಯಗಳಿಸಲು ಶ್ರಮಿಸಬೇಕೆಂದು ಕರೆಕೊಟ್ಟರು. ಈ ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ತಿಪಟೂರಿನ ಮೆಲ್ವಿಚಾರಿಕಿಯರಾದ ಶ್ರೀಮತಿ. ಪ್ರೇಮಾ, ಮಂಜುಳ, ವತ್ಸಲ, ಸ್ವಸಹಾಯ ಸಂಘದ ಒಕ್ಕೂಟದ ಅಧ್ಯಕ್ಷರಾದ ಶ್ರೀಮತಿ ಭಾಗ್ಯ, ಸಂಪನ್ಮೂಲ ವ್ಯಕ್ತಿಗಳಾದ ಶ್ರೀಮತಿ ರೇಖಾ, ಶ್ರೀಮತಿ ಕಲ್ಪನಾ ಹಾಗೂ ತಿಪಟೂರು ತಾಲ್ಲೂಕಿನ ಸ್ವಸಹಾಯ ಸಂಘದ 85 ಸದಸ್ಯರು ಭಾಗವಹಿಸಿದ್ದರು. ಕಾರ್ಯಕ್ರಮದ ನಂತರ ಶ್ರೀಮತಿ ರೇಖಾರವರು ಮಹಿಳೆಯರಲ್ಲಿ ಆರ್ಥಿಕ ಸಾಕ್ಷರತೆ ಕುರಿತು ಅರಿವು ಮೂಡಿಸಿದರು ಹಾಗೂ ಶ್ರಿಮತಿ ಕಲ್ಪನಾರವರು ಮೌಲ್ಯವರ್ಧಿತ ಉತ್ಪನ್ನಗಳಾದ ರಾಗಿ ಮಾಲ್ಟ್, ಹುರಿಯಿಟ್ಟು ಹಾಗೂ ಹಪ್ಪಳ ಮಾಡುವುದನ್ನು ಪ್ರಾತ್ಯಕ್ಷಿಕೆ ಮೂಲಕ ಪರಿಚಯಿಸಿದರು.



## ಕರ್ನಾಟಕ ಕೃಷಿ ಬೆಲೆ ಆಯೋಗದ ರೈತರ ಆದಾಯ ಮತ್ತು ಕಲ್ಯಾಣ ವೃದ್ಧಿ ಯೋಜನೆಯಡಿ ಗ್ರಾಮ ಸಭೆ



ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿ ವತಿಯಿಂದ ಕರ್ನಾಟಕ ಕೃಷಿ ಬೆಲೆ ಆಯೋಗ, ಕರ್ನಾಟಕ ಸರ್ಕಾರ ಪ್ರಾಯೋಜಿತ ರೈತರ ಆದಾಯ ಮತ್ತು ಕಲ್ಯಾಣ ವೃದ್ಧಿ ಯೋಜನೆಯಡಿ ಹುಲ್ಲುಕಟ್ಟೆ ಗ್ರಾಮದಲ್ಲಿ ದಿನಾಂಕ 21.08.2018 ರಂದು ಇಲಾಖಾವಾರು ಪ್ರಸ್ತುತ ಸಾಲಿಗೆ ರೈತರಿಗೆ ಲಭ್ಯವಿರುವ ಯೋಜನೆಗಳ ಬಗ್ಗೆ ಅರಿವು ನೀಡಲು ಗ್ರಾಮಸಭೆಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಗ್ರಾಮಸಭೆಯಲ್ಲಿ ಕೃಷಿ ಅಧಿಕಾರಿಗಳಾದ ಶ್ರೀಮತಿ ಸವಿತ, ತೋಟಗಾರಿಕ ಸಹಾಯಕರಾದ ಶ್ರೀಮತಿ ರತ್ನಮ್ಮ, ಪಶುಸಂಗೋಪನಾ ಇಲಾಖೆಯ ವಿಸ್ತರಣಾ ಅಧಿಕಾರಿಗಳಾದ ಶ್ರೀ. ಮಹೇಶ್, ರೇಷ್ಮೆ ಇಲಾಖೆಯ ವಿಸ್ತರಣಾ ಅಧಿಕಾರಿಗಳಾದ ಶ್ರೀ. ಶಿವನಂಜಪ್ಪ, ಅರಣ್ಯ ಪಾಲಕರಾದ ಶ್ರೀಮತಿ ನೀಲಮ್ಮ, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯ ಸಹಾಯಕ ನಿರ್ದೇಶಕರಾದ ಶ್ರೀ. ಸುರೇಶ್ ತಮ್ಮ ತಮ್ಮ ಇಲಾಖೆಯಲ್ಲಿ ಲಭ್ಯವಿರುವ ಯೋಜನೆಗಳ ಬಗ್ಗೆ ಸವಿವರವಾಗಿ ತಿಳಿಸಿ ಯೋಜನೆಗಳ ಲಾಭ ಪಡೆಯುವಂತೆ ತಿಳಿಸಿದರು ಹಾಗೂ ಕರ್ನಾಟಕ ಕೃಷಿ ಬೆಲೆ ಆಯೋಗ, ಕರ್ನಾಟಕ ಸರ್ಕಾರ ಪ್ರಾಯೋಜಿತ ರೈತರ ಆದಾಯ ಮತ್ತು ಕಲ್ಯಾಣ ವೃದ್ಧಿ ಯೋಜನೆಯ ಆಯ್ದ ಗ್ರಾಮಗಳಾದ ಹುಲ್ಲುಕಟ್ಟೆ ಮತ್ತು ಕೊಪ್ಪ ಗ್ರಾಮಗಳಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡುವುದಾಗಿ ತಿಳಿಸಿದರು. ಗ್ರಾಮಸಭೆಯಲ್ಲಿ ಯೋಜನೆಯ ಮುಂಚೂಣಿ ಪ್ರಾತ್ಯಕ್ಷಿಕೆಗೆ ಆಯ್ದ ರೈತರ ಮಣ್ಣು ಪರೀಕ್ಷೆಯ ಫಲಿತಾಂಶ ಚೀಟಿಗಳನ್ನು ಆಯ್ದ ರೈತರಿಗೆ ಈಚನೂರು ಗ್ರಾಮ ಪಂಚಾಯತಿಯ ಅಧ್ಯಕ್ಷರಾದ ಶ್ರೀ. ಗಿರೀಶ್‌ರವರು ಫಲಾನುಭವಿಗಳಿಗೆ ವಿತರಿಸಿದರು. ಈ ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳಾದ ಡಾ. ನಾಗಪ್ಪ ದೇಸಾಯಿ, ಡಾ. ಅನಿತಾ, ಡಾ. ಶಂಕರ್, ಡಾ. ಶಿವಪ್ಪ ನಾಯಕ್ ಹಾಗೂ ಯೋಜನೆಯ ಸಂಶೋಧನಾ ಸಹಾಯಕರಾದ ಕುಮಾರಿ ವೀಣಾ, ಕ್ಷೇತ್ರ ಸಹಾಯಕರಾದ ಕರಿಯಪ್ಪ ಹಾಗೂ ಹುಲ್ಲುಕಟ್ಟೆ ಮತ್ತು ಕೊಪ್ಪಾದ ರೈತ ಮತ್ತು ರೈತ ಮಹಿಳೆಯರು ಭಾಗವಹಿಸಿದ್ದರು. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಈಚನೂರು ಗ್ರಾಮ ಪಂಚಾಯತಿಯ ಅಧ್ಯಕ್ಷರಾದ ಶ್ರೀ. ಗಿರೀಶ್ ರವರು ವಹಿಸಿಕೊಂಡಿದ್ದರು.

## ಪಾರ್ಥೇನಿಯಂ ಜಾಗೃತಿ ಸಪ್ತಾಹ



ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿ ಮತ್ತು ಕನ್ನಡ ಭಾರತಿ ಪ್ರೌಢಶಾಲೆ, ಹೊನ್ನಹೊಳ್ಳಿ ವತಿಯಿಂದ ಪಾರ್ಥೇನಿಯಂ ಜಾಗೃತಿ ಸಪ್ತಾಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ, ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿಯ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರಾದ ಡಾ.ವಿ. ಗೋವಿಂದಗೌಡರವರು ಉದ್ಘಾಟಿಸಿ ಸ್ವಚ್ಛ ಭಾರತ ಆಂದೋಲನದಲ್ಲಿ ಪಾರ್ಥೇನಿಯಂ ನಿಯಂತ್ರಣವು ಪ್ರಮುಖ ಪಾತ್ರವಾಗಿದ್ದು ಜಮೀನಿನಲ್ಲಿ ಭೌತಿಕವಾಗಿ, ಜೈವಿಕವಾಗಿ ಹಾಗೂ ರಾಸಾಯನಿಕವಾಗಿ ನಿಯಂತ್ರಣ ಮಾಡುವುದರಿಂದ ಬೆಳೆಯಲ್ಲಿ ಅಧಿಕ ಇಳುವರಿ ಪಡೆಯಬಹುದು ಹಾಗೂ ನಮ್ಮ ಸುತ್ತಮುತ್ತಲಿನ ಪರಿಸರವನ್ನು ಪಾರ್ಥೇನಿಯಂ ಮುಕ್ತವಾಗಿ ಇಟ್ಟುಕೊಳ್ಳುವುದರಿಂದ ಆರೋಗ್ಯದ ಮೇಲಾಗುವ ದುಷ್ಪರಿಣಾಮಗಳನ್ನು ಕಡಿಮೆ ಮಾಡಬಹುದೆಂದು ತಿಳಿಸಿದರು. ಶಾಲೆಯ ಶಿಕ್ಷಕರಾದ ಶ್ರೀ. ಮಂಜೇಗೌಡರವರು ಮಕ್ಕಳಲ್ಲಿ ತಿಳುವಳಿಕೆ ಮೂಡಿಸಲು ಇಂತಹ ಜಾಗೃತಿ ಸಪ್ತಾಹಗಳನ್ನು ಹಮ್ಮಿಕೊಳ್ಳುವುದರಿಂದ ಸ್ವಚ್ಛ ಭಾರತಕ್ಕೆ ಮುನ್ನುಡಿಯಾಗಲಿದೆಯೆಂದು ಹೇಳಿದರು. ಈ ಕಾರ್ಯಕ್ರಮದಲ್ಲಿ ಶಾಲೆಯ ಸುತ್ತಮುತ್ತ ಇದ್ದಂತಹ ಪಾರ್ಥೇನಿಯಂ ಗಿಡಗಳು ಹಾಗೂ ತ್ಯಾಜ್ಯಗಳನ್ನು ಶುಚಿಮಾಡುವುದರ ಮುಖಾಂತರ ಕಾರ್ಯಕ್ರಮಕ್ಕೆ ಒಂದು ಅರ್ಥವನ್ನು ನೀಡಲಾಯಿತು. ಈ ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕರು, ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹಾಗೂ ಕೃಷಿ ವಿಜ್ಞಾನ ಕೇಂದ್ರದ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

# ರಾಷ್ಟ್ರೀಯ ಪೌಷ್ಟಿಕ ಆಹಾರ ಸಪ್ತಾಹ



ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ ಇಲಾಖೆ, ತಿಪಟೂರು, ಕೃಷಿ ವಿಜ್ಞಾನ ಕೇಂದ್ರ ಕೊನೇಹಳ್ಳಿ ಹಾಗೂ ತಾಲ್ಲೂಕು ಸ್ತ್ರೀಶಕ್ತಿ ಒಕ್ಕೂಟ ತಿಪಟೂರು ಇವರುಗಳ ಸಂಯುಕ್ತಾಶ್ರಯದಲ್ಲಿ "ರಾಷ್ಟ್ರೀಯ ಪೌಷ್ಟಿಕ ಆಹಾರ ಸಪ್ತಾಹ" ಹಾಗೂ ತೆಂಗು ದಿನಾಚರಣೆಯ ಭಾಗವಾಗಿ ಜಾಗೃತಿ ಕಾರ್ಯಕ್ರಮ ತಾಲ್ಲೂಕಿನ ಮದ್ಲೇಹಳ್ಳಿ ಗ್ರಾಮದಲ್ಲಿ ಜರುಗಿತು. ಕಾರ್ಯಕ್ರಮದ ಉದ್ಘಾಟನೆಯನ್ನು ಜ್ಯೋತಿ ಬೆಳಗಿಸುವುದರ ಮೂಲಕ ತಾಲ್ಲೂಕು ಪಂಚಾಯಿತಿ ಅಧ್ಯಕ್ಷರಾದ ಎಂ.ಎನ್.ಸುರೇಶ್‌ರವರು ನೆರವೇರಿಸಿ ಪೌಷ್ಟಿಕ ಆಹಾರದ ಬಗ್ಗೆ ಜಾಗೃತಿ ಮೂಡಿಸುವುದು ಇತ್ತೀಚಿನ ದಿನಗಳಲ್ಲಿ ಅತ್ಯಗತ್ಯವಾಗಿದೆ ಎಂದರು. ಪೌಷ್ಟಿಕಾಂಶಯುಕ್ತ ಆಹಾರ 6 ವರ್ಷದೊಳಗಿನ ಮಕ್ಕಳು, ಗರ್ಭಿಣಿ, ಬಾಣಂತಿಯರಿಗೆ ಅತ್ಯಗತ್ಯವಾಗಿದ್ದು ಸ್ಥಳೀಯವಾಗಿ ದೊರೆಯುವ ಪೌಷ್ಟಿಕ ಆಹಾರ ಸೇವನೆಗೆ ಒತ್ತು ನೀಡಲು ತಿಳಿಸಿ ಒಟ್ಟಾರೆಯಾಗಿ ದೇಹಕ್ಕೆ ಅವಶ್ಯವಿರುವ ಪೌಷ್ಟಿಕಾಂಶವುಳ್ಳ ಆಹಾರ ಸೇವಿಸುವುದರ ಮೂಲಕ ಪೌಷ್ಟಿಕ ಮಟ್ಟವನ್ನು ಕಾಪಾಡಿಕೊಳ್ಳುವ ಕಡೆ ಹೆಚ್ಚಿನ ಗಮನ ಹರಿಸಬೇಕು ಎಂದು ತಿಳಿಸಿದರು. ಪೌಷ್ಟಿಕ ಆಹಾರವನ್ನು ಸೇವಿಸದೆ ಬರುತ್ತಿರುವ ರೋಗಗಳ ಬಗ್ಗೆ ತಿಳಿಸಿದರು. ಮನೆಯ ಮುಂದೆ ಕೈತೋಟ ಮಾಡಿಕೊಳ್ಳುವಂತೆ ಸಲಹೆ ನೀಡಿದರು. ಪೌಷ್ಟಿಕ ಆಹಾರ ಸೇವಿಸುವುದರ ಜೊತೆಗೆ ಯೋಗ, ಧ್ಯಾನ ಮಾಡಬೇಕೆಂದು ಸಲಹೆ ನೀಡಿದರು. ಸಿರಿಧಾನ್ಯಗಳನ್ನು ಹೆಚ್ಚಾಗಿ ಬಳಸುವುದರಿಂದ ಬಿ.ಪಿ ಶುಗರ್ ತಡೆಗಟ್ಟಬಹುದೆಂದು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಡಾ॥ ಶಂಕರ್, ವಿಷಯ ತಜ್ಞರು, ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿ, ಇವರು ದಿನನಿತ್ಯ ಬಳಸುವಂತಹ ಹಸಿರು ಸೊಪ್ಪು, ತರಕಾರಿ ಇವುಗಳನ್ನು ಅತೀ ಹೆಚ್ಚಾಗಿ ಬಳಸುವಂತೆ ತಿಳಿಸಿದರು ಮತ್ತು ಗರ್ಭಿಣಿ ಮತ್ತು ಬಾಣಂತಿ ಮಹಿಳೆಯರು ಸೇವಿಸುವ ಆಹಾರದಲ್ಲಿ ಹೆಚ್ಚಿನ ಪೋಷಕಾಂಶವುಳ್ಳ ಬೇಳೆ ಕಾಳು, ಸ್ಥಳೀಯವಾಗಿ ಸಿಗುವಂತಹ ಹಣ್ಣುಗಳನ್ನು, ಮೊಳಕೆ ಭರಿಸಿದ ಕಾಳು ನಿಯಮಿತವಾಗಿ ಸೇವಿಸುವುದರಿಂದ ಆರೋಗ್ಯವು ಉತ್ತಮವಾಗಿರುತ್ತದೆ ಎಂದು ತಿಳಿಸಿದರು. ಸೊಪ್ಪುಗಳನ್ನು ಆಹಾರದಲ್ಲಿ ಉಪಯೋಗಿಸುವುದರಿಂದ ಜೀವಸತ್ವ ಎ ಮತ್ತು ಸಿ ಸಿಗುತ್ತದೆ. ಕಣ್ಣಿನ ಸಮಸ್ಯೆ ಇದ್ದವರಿಗೆ ಈ ಸೊಪ್ಪನ್ನು ತಿನ್ನುವುದರಿಂದ ಸಮಸ್ಯೆಯನ್ನು ನಿವಾರಿಸಿಕೊಳ್ಳಬಹುದೆಂದು ತಿಳಿಸಿದರು. ಮೊಳಕೆ ಕಾಳುಗಳನ್ನು ಹಾಗೂ ದ್ವಿದಳ ದಾನ್ಯಗಳನ್ನು ಬಳಸುವುದು ಹಾಗೂ ನಾರಿನಂಶವುಳ್ಳ ದಂಟು ಮತ್ತು ಸೊಪ್ಪು ಇವುಗಳನ್ನು ಉಪಯೋಗಿಸುವುದರಿಂದ ಜೀರ್ಣಕ್ರಿಯೆ ಉತ್ತಮವಾಗಿರುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಗರ್ಭಿಣಿ ಮಹಿಳೆಯರಿಗೆ ಸೀಮಂತ ಕಾರ್ಯಕ್ರಮ ಜರುಗಿತು.

ಪ್ರಾಸ್ತಾವಿಕ ನುಡಿಗಳನ್ನಾಡಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಶ್ರೀ ಪಿ.ಓಂಕಾರಪ್ಪ ನವರು ಕಾರ್ಯಕ್ರಮದ ಉದ್ದೇಶ ತಿಳಿಸಿ, ಮನೆಯಲ್ಲಿ ಬೆಳೆಯುವ ಪದಾರ್ಥಗಳನ್ನು ಬಳಸುವಂತೆ ಹಾಗೂ ಸ್ಥಳೀಯವಾಗಿಸಿಗುವ ಸೊಪ್ಪು, ತರಕಾರಿಗಳನ್ನು ಉಪಯೋಗಿಸುವಂತೆ ತಿಳಿಸಿದರು. ಹಾಗೂ ಇಲಾಖೆಯಿಂದ ಸಿಗುವ ಸೌಲಭ್ಯಗಳಾದ, ಮಾತೃಪೂರ್ಣ ಯೋಜನೆ, ಪ್ರಧಾನಮಂತ್ರಿ ಮಾತೃವಂದನ ಯೋಜನೆ, ಭಾಗ್ಯಲಕ್ಷ್ಮಿ ಯೋಜನೆ, ಸ್ತ್ರೀಶಕ್ತಿ ಯೋಜನೆಗಳ ಬಗ್ಗೆ, ಬಾಲ್ಯ ವಿವಾಹದ ನಿಷೇಧದ ಬಗ್ಗೆ ಸವಿವರವಾಗಿ ತಿಳಿಸಿದರು. ಡಾ॥ ಗೋವಿಂದ ಗೌಡರು, ಮುಖ್ಯಸ್ಥರು, ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿ ಇವರು "ತೆಂಗು ದಿನಾಚರಣೆ" ಬಗ್ಗೆ ಮಾತನಾಡಿ ತೆಂಗಿನ ಸಂರಕ್ಷಣೆ, ತೆಂಗಿನ ಉತ್ಪನ್ನಗಳ ತಯಾರಿಕೆಯಿಂದ ರೈತರಿಗೆ ಸಿಗುವ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು. ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಮಾತನಾಡಿದ ಶ್ರೀ ನಂದಕುಮಾರ್, ಬದುಕು ಸಾಂತ್ವನ ಕೇಂದ್ರ ಇವರು ಮಾತನಾಡಿ ರಾಷ್ಟ್ರೀಯ ಪೌಷ್ಟಿಕ ಆಹಾರ ಸಪ್ತಾಹದ ಜಾಗೃತಿ ಕಾರ್ಯಕ್ರಮದ ಪ್ರಯೋಜನ ಪಡೆಯಲು ತಿಳಿಸಿ ಮಾತನಾಡಿ ಮಹಿಳೆಯರು ವಿವಿಧ ರೀತಿಯಲ್ಲಿ ದೌರ್ಜನ್ಯಗಳಿಗೆ ಒಳಗಾಗುತ್ತಿದ್ದಾರೆ. ಇಂತಹ ದೌರ್ಜನ್ಯಗಳನ್ನು ತಡೆಯಲು ಕೌಟುಂಬಿಕ ದೌರ್ಜನ್ಯ ತಡೆ



ಕಾಯ್ದೆ 2005 ಜಾರಿಗೆ ತರಲಾಗಿದೆ. ಹಾಗೂ ಮಕ್ಕಳ ಮೇಲಿನ ದೌರ್ಜನ್ಯಗಳನ್ನು ತಡೆಯಲು ಪೋಕ್ಸೋ ಕಾಯ್ದೆಯನ್ನು ಜಾರಿಗೆ ತರಲಾಗಿದ್ದು. ಈ ಕಾಯ್ದೆಯು 18 ವರ್ಷದೊಳಗಿನ ಗಂಡು ಮತ್ತು ಹೆಣ್ಣು ಮಕ್ಕಳಿಗೆ ಅನ್ವಯಿಸುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ಶ್ರೀಲತಾ, ಸಂರಕ್ಷಣಾಧಿಕಾರಿಗಳು, ಪೌಷ್ಟಿಕಾಂಶಗಳ ಬಗ್ಗೆ, ಶುಚಿತ್ವದ ಬಗ್ಗೆ, ತಂಬಾಕುಗಳನ್ನು ಉಪಯೋಗಿಸುವುದರಿಂದ ಕ್ಯಾನ್ಸರ್ ಖಾಯಿಲೆಗಳು ಬರುವ ಬಗ್ಗೆ ತಿಳಿಸಿದರು. ಬಾಲ್ಯವಿವಾಹ ಮತ್ತು ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ ಬಗ್ಗೆ ವಿವರವಾಗಿ ಮಾಹಿತಿ ನೀಡಿದರು. ಡಾ|| ಹುಲುಗೂರು, ನಿವೃತ್ತ ಜನರಲ್ ಮ್ಯಾನೇಜರ್, ನಬಾರ್ಡ್ ಇವರು ಪೆಟ್ರೋಲಿಯಂ ಉತ್ಪನ್ನಗಳ ಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಶ್ರೀಮತಿ ರೇಖಾ, ಆರ್ಥಿಕ ಸಾಕ್ಷರತಾ ಕೇಂದ್ರ, ಶ್ರೀ ಪುಟ್ಟಸ್ವಾಮಿ, ತಾ.ಪಂ.ಸದಸ್ಯರು, ಅರಳಗುಪ್ಪೆ, ಶ್ರೀ ಸಿದ್ದೇಶ್,ಮಾಜಿ ಉಪಾಧ್ಯಕ್ಷರು, ಹಾಲಿ ಸದಸ್ಯರು, ಶ್ರೀ ಸುಧಾಮಣಿ, ಗ್ರಾಮ ಪಂಚಾಯಿತಿ ಸದಸ್ಯರು, ಶ್ರೀ ನಾಗರಾಜು, ಅಧ್ಯಕ್ಷರು, ಹಾಲು ಉತ್ಪಾದಕರ ಸಂಘ, ಎಸ್.ಡಿ.ಎಂ.ಸಿ ಅಧ್ಯಕ್ಷರು ಶ್ರೀ ದಕ್ಷಿಣಮೂರ್ತಿ, ಡಾ|| ಅನಿತಾ, ಕೆವಿಕೆ ಕೊನೇಹಳ್ಳಿ, ಶ್ರೀ. ನಾಗೇಶ್, ತೆಂಗಿನ ವರ್ಜಿನ್ ಎಣ್ಣೆ ತಯಾರಕರು, ಶ್ರೀಮತಿ ಬಿ.ಎನ್.ಪ್ರೇಮ, ಶ್ರೀಮತಿ ಮಂಜುಳಾದೇವಿ, ಶ್ರೀಮತಿ ವತ್ಸಲಾ, ಮೇಲ್ವಿಚಾರಕಿಯರು, ಅಂಗನವಾಡಿ ಕಾರ್ಯಕರ್ತೆಯರು, ಸ್ತ್ರೀಶಕ್ತಿ ಮಹಿಳೆಯರು, ಊರಿನ ಗ್ರಾಮಸ್ಥರು ಕಾರ್ಯಕ್ರಮದಲ್ಲಿ ಹಾಜರಿದ್ದರು. ಮೊದಲಿಗೆ ಕುಮಾರಿ ಅನುಶ್ರೀ ಪ್ರಾರ್ಥನೆ, ಸ್ವಾಗವನ್ನು ಶ್ರೀಮತಿ ಭಾಗ್ಯಮ್ಮ, ಮೇಲ್ವಿಚಾರಕಿ, ನಿರೂಪಣೆ ಶ್ರೀಮತಿ ಪ್ರೇಮ.ಬಿ.ಎಲ್ ಅಂಗನವಾಡಿ ಕಾರ್ಯಕರ್ತೆಯಿಂದ ಜರುಗಿತು. ಕಾರ್ಯಕ್ರಮದಲ್ಲಿ ಗರ್ಭಿಣಿ, ಬಾಣಂತಿಯರು, ಕಿಶೋರಿಯರು, ಸ್ತ್ರೀಶಕ್ತಿ ಮಹಿಳೆಯರು ಮತ್ತು ಗ್ರಾಮಸ್ಥರು ಸುಮಾರು 100ಕ್ಕೂ ಹೆಚ್ಚು ಜನ ಭಾಗವಹಿಸಿದ್ದರು.

## ಸ್ವಚ್ಛ ಭಾರತ ಅಭಿಯಾನ "ಆರೋಗ್ಯ ಮತ್ತು ಸ್ವಚ್ಚತಾ ಜಾಗೃತಿ ಕಾರ್ಯಕ್ರಮ"



ದಿನಾಂಕ 26.09.2018 ರಂದು ಐ.ಸಿ.ಎ.ಆರ್. – ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿ ಮತ್ತು ಕರ್ನಾಟಕ ಸರ್ಕಾರ ಪ್ರಾಯೋಜಿತ ಕರ್ನಾಟಕ ಕೃಷಿ ಬೆಲೆ ಆಯೋಗದ ರೈತರ ಆದಾಯ ಮತ್ತು ಕಲ್ಯಾಣ ವೃದ್ಧಿ ಯೋಜನೆಯ ಸಂಯುಕ್ತಾಶ್ರಯದಲ್ಲಿ ಸ್ವಚ್ಛ ಭಾರತ ಅಭಿಯಾನದ ಅಂಗವಾಗಿ "ಆರೋಗ್ಯ ಮತ್ತು ಸ್ವಚ್ಚತಾ ಜಾಗೃತಿ ಕಾರ್ಯಕ್ರಮ" ವನ್ನು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಈಚನೂರು, ತಿಪಟೂರು ಇಲ್ಲಿ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿಯ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರಾದ ಡಾ.ವಿ. ಗೋವಿಂದಗೌಡರವರು ಸ್ವಚ್ಛತೆಗೆ ಹೆಚ್ಚಿನ ಮಹತ್ವ ಕೊಡುವುದರ ಜೊತೆಗೆ ನೈರ್ಮಲ್ಯತೆಯನ್ನು ಕಾಪಾಡುವಂತೆ ಮಕ್ಕಳಿಗೆ ತಿಳಿ ಹೇಳಿ, ಒಣ ಕಸ ಹಾಗೂ ಹಸಿ ಕಸದ ಬಗ್ಗೆ ವಿವರಿಸುತ್ತ, ಅವುಗಳನ್ನು ಬೇರ್ಪಡಿಸಿ ಹಸಿ ಕಸವನ್ನು ಜೈವಿಕ ಗೊಬ್ಬರವನ್ನಾಗಿ ಮಾರ್ಪಡು ಮಾಡಿ ಬೆಳೆಗಳಿಗೆ ಜೈವಿಕ ಅಂಶವನ್ನು ಒದಗಿಸಿ ಸದುಪಯೋಗ ಪಡೆಯುವಂತೆ ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಗ್ರಾಮ ಪಂಚಾಯ್ತಿ ಈಚನೂರಿನ ಅಧ್ಯಕ್ಷರಾದ ಶ್ರೀ. ಗಿರೀಶರವರು ಬಯಲು ಮುಕ್ತ ಗ್ರಾಮವನ್ನಾಗಿ ಮಾರ್ಪಾಡು ಮಾಡಬೇಕೆಂದು ಕರೆ ನೀಡಿದರು. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಈಚನೂರು ಗ್ರಾಮ ಪಂಚಾಯ್ತಿಯ ಪಿ.ಡಿ.ಓ. ರವರಾದ ಶ್ರೀಯುತ ರಮೇಶರವರು ಶಾಲಾ ಶಿಕ್ಷಕರು ನೈರ್ಮಲ್ಯದ ಬಗ್ಗೆ ಹೆಚ್ಚಿನ ಮಹತ್ವ ನೀಡಿ ಮಕ್ಕಳಲ್ಲಿ ಸ್ವಚ್ಛತೆಯ ಬಗ್ಗೆ ಜಾಗೃತಿ ಮೂಡಿಸುವ ಪ್ರಯತ್ನ ಮಾಡಬೇಕೆಂದು ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಐ.ಸಿ.ಎ.ಆರ್. ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿ ವಿಜ್ಞಾನಿಗಳಾದ ಡಾ. ಶಂಕರ್, ಡಾ. ಶಿವಪ್ಪನಾಯಕ, ಶ್ರೀಮತಿ. ಬಿಂದು, ಕೃಷಿ ಸಂಶೋಧನಾ ಕೇಂದ್ರದ ಮುಖ್ಯಸ್ಥರಾದ ಡಾ. ಯೋಗೇಶ್‌ರವರು, ಕರ್ನಾಟಕ ಕೃಷಿ ಬೆಲೆ ಆಯೋಗದ ಸಂಶೋಧನಾ ಸಹಾಯಕಿ ಕು. ವೀಣಾ, ಕ್ಷೇತ್ರ ಸಹಾಯಕರಾದ ಶ್ರೀ. ಕರಿಯಪ್ಪ, ಈಚನೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯಿನಿಯಾದ ಶ್ರೀಮತಿ ಸುಶೀಲ, ಶಾಲೆಯ ಸಿಬ್ಬಂದಿ ವರ್ಗ ಹಾಗೂ ಮಕ್ಕಳು ಭಾಗವಹಿಸಿದ್ದರು.

## ಕ್ಷೇತ್ರೋತ್ಸವ ವಿಶೇಷ ಕಾರ್ಯಕ್ರಮ "ಮೆಣಸಿನಕಾಯಿಯಲ್ಲಿ ಸಮಗ್ರ ಬೆಳೆ ನಿರ್ವಹಣೆ"

ದಿನಾಂಕ 27.09.2018 ರಂದು ಐ.ಸಿ.ಎ.ಆರ್. – ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿ ವತಿಯಿಂದ ಕ್ಷೇತ್ರೋತ್ಸವದ ಅಂಗವಾಗಿ "ಮೆಣಸಿನಕಾಯಿಯಲ್ಲಿ ಸಮಗ್ರ ಬೆಳೆ ನಿರ್ವಹಣೆ" ಕಾರ್ಯಕ್ರಮವನ್ನು ಮೇಲಿನವಲಗೆರೆಹಳ್ಳಿ, ತುರುವೇಕೆರೆಯ ಫಲಾನುಭವಿಗಳಾದ

ಮೋಹನ್ ಎಂಬ ರೈತರ ಜಮೀನಿನಲ್ಲಿ ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿಯ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರಾದ ಡಾ.ವಿ. ಗೋವಿಂದಗೌಡರವರು ಮೆಣಸಿನಕಾಯಿಯಲ್ಲಿ ಸಮಗ್ರ ಬೆಳೆ ನಿರ್ವಹಣೆ ಬಗ್ಗೆ ವಿವರಿಸುತ್ತಾ ಅರ್ಕಾ ಖ್ಯಾತಿ ತಳಿಯ ಮಹತ್ವವನ್ನು ತಿಳಿಸಿದರು. ಮಣ್ಣು ವಿಜ್ಞಾನಿಗಳಾದ ಡಾ. ಅನಿತಾ ಎಂ.ಎಸ್. ರವರು ಮೆಣಸಿನಕಾಯಿ ಬೆಳೆಯ ಬೇಸಾಯ ಕ್ರಮಗಳ ಬಗ್ಗೆ ವಿವರಿಸುವುದರ ಜೊತೆಗೆ ಮಣ್ಣಿನ ಆರೋಗ್ಯ ಮತ್ತು ಫಲವತ್ತತೆಯ ಬಗ್ಗೆ ತಿಳಿಸಿದರು. ಈ ಕಾರ್ಯಕ್ರಮದಲ್ಲಿ ತೋಟಗಾರಿಕಾ ವಿಜ್ಞಾನಿಗಳಾದ ಡಾ. ನಾಗಪ್ಪ ದೇಸಾಯಿಯವರು ಹೊಸ ತಳಿಯಾದ ಅರ್ಕಾ ಖ್ಯಾತಿ ತಳಿಯ ಮಹತ್ವದ ಬಗ್ಗೆ ತಿಳಿಸುತ್ತಾ ಈ ತಳಿಯನ್ನು ಹಸಿರು ಮತ್ತು ಒಣ ಮೆಣಸಿನಕಾಯಿಯಾಗಿ ಉಪಯೋಗಿಸಬಹುದೆಂದು ವಿವರಿಸಿದರು. ಮುಂದುವರೆದು ಅರ್ಕಾ ಖ್ಯಾತಿ ತಳಿಯ ಹಸಿ ಮೆಣಸಿನಕಾಯಿಯ ಇಳುವರಿಯು ಎಕರೆಗೆ 150 ರಿಂದ 160 ಕ್ವಿಂಟಾಲ್ ಮತ್ತು ಒಣ ಮೆಣಸಿನಕಾಯಿಯ ಇಳುವರಿಯು ಎಕರೆಗೆ 18 ರಿಂದ 20 ಕ್ವಿಂಟಾಲ್ ವರೆಗೆ ಬರುವುದೆಂದು ತಿಳಿಸಿದರು. ಡಾ. ಶ್ರೀನಿವಾಸ ಸಸ್ಯ ಸಂರಕ್ಷಣಾ ವಿಜ್ಞಾನಿಗಳು ಮೆಣಸಿನಕಾಯಿ ಬೆಳೆಯ ಸಮಗ್ರ ರೋಗ ಮತ್ತು ಕೀಟ ನಿರ್ವಹಣೆ ಬಗ್ಗೆ ವಿವರಿಸಿದರು. ಈ ಕಾರ್ಯಕ್ರಮದಲ್ಲಿ ಪ್ರಗತಿಪರ ರೈತರಾದ ತಿಮ್ಮಪ್ಪನವರು ಹಾಗೂ ಗ್ರಾಮ ಪಂಚಾಯತಿ ಸದಸ್ಯರು, ಮೇಲಿನವಲಗೆರೆಹಳ್ಳಿಯ ಈಶ್ವರಗೌಡರವರು ಮತ್ತು ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿ ವಿಜ್ಞಾನಿಗಳು, ಕೃಷಿ ಪರಿಕರಗಳ ಮಾರಾಟಗಾರರಾದ ಶ್ರೀಧರ್ ಮೂರ್ತಿ ಮತ್ತು ಎಲ್ಲಾ ರೈತ ಮತ್ತು ರೈತ ಮಹಿಳೆಯರು ಭಾಗವಹಿಸಿದ್ದರು.



## ತೆಂಗಿನ ಸಮಗ್ರ ಪೀಡೆ ನಿರ್ವಹಣೆಯ ತರಬೇತಿ ಕಾರ್ಯಕ್ರಮ

ದಿನಾಂಕ 03.11.2018 ರಂದು ಐ.ಸಿ.ಎ.ಆರ್. – ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿ ಹಾಗೂ ಕರ್ನಾಟಕ ಕೃಷಿ ಬೆಲೆ ಆಯೋಗದ ರೈತರ ಆದಾಯ ಹಾಗೂ ಕಲ್ಯಾಣ ವೃದ್ಧಿ ಯೋಜನೆಯ ವತಿಯಿಂದ ಯೋಜನೆಯ ಅಧ್ಯಯನ ಗ್ರಾಮವಾದ ಹುಲ್ಲುಕಟ್ಟೆ–ಕೊಪ್ಪಾದಲ್ಲಿ ತೆಂಗಿನ ಸಮಗ್ರ ಪೀಡೆ ನಿರ್ವಹಣೆಯ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು ಅದರಲ್ಲೂ ವಿಶೇಷವಾಗಿ ತೆಂಗಿಗೆ ಹೊಸದಾಗಿ ಕಾಣಿಸಿಕೊಂಡಿರುವ ಸುರುಳಿ ಬಿಳಿ ನೊಣದ ನಿರ್ವಹಣೆಯ ಬಗ್ಗೆ ಕ್ಷೇತ್ರ ಭೇಟಿ ಹಾಗೂ ತರಭೇತಿಯನ್ನು ಹಮ್ಮಿಕೊಳ್ಳಲಾಗಿತ್ತು.



ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ತೋಟಗಾರಿಕಾ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರ, ಬೋರನಕೊಪ್ಪಲು, ಅರಸೀಕೆರೆಯ ಮುಖ್ಯಸ್ಥರು ಹಾಗೂ ಕೀಟಶಾಸ್ತ್ರದ ತಜ್ಞರಾದ ಡಾ. ಚಂದ್ರಶೇಖರ್ ರವರು ತೆಂಗಿಗೆ ಪೀಡಿಸುವ ಕೀಟಗಳು ಹಾಗೂ ಅವುಗಳ ಸಮಗ್ರ ನಿರ್ವಹಣೆಯ ಬಗ್ಗೆ ತಿಳಿಸಿ, ತೆಂಗಿಗೆ ಹೊಸದಾಗಿ ಈ ಪ್ರಾಂತ್ಯದಲ್ಲಿ ಅದರಲ್ಲು ಕೊಪ್ಪ ಗ್ರಾಮದಲ್ಲಿ ಕಾಣಿಸಿಕೊಂಡಿರುವ ಸುರುಳಿ ಬಿಳಿ ನೊಣದ ನಿರ್ವಹಣೆಯ ಬಗ್ಗೆ ತಿಳಿಸುತ್ತ ಸುರುಳಿ ಬಿಳಿ ನೊಣವನ್ನು ಪರಭಕ್ಷಕ ಕೀಟಗಳನ್ನು ಬಿಡುಗಡೆ ಮಾಡುವ ಮುಖಾಂತರ ಹತೋಟಿ ಮಾಡಬಹುದೆಂದು ತಿಳಿಸಿ ರೈತರು ಆತಂಕಗೊಳ್ಳಬಾರದೆಂದು ತಿಳಿ ಹೇಳಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಐ.ಸಿ.ಎ.ಆರ್– ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿಯ ಸಸ್ಯ ಸಂರಕ್ಷಣೆಯ ವಿಜ್ಞಾನಿಯಾದ ಡಾ. ಶ್ರೀನಿವಾಸ್ ರವರು ತೆಂಗಿನ ರೋಗಗಳ ನಿರ್ವಹಣೆಯ ಬಗ್ಗೆ ತಿಳಿಸುವುದರ ಜೊತೆಗೆ ರೋಗಗಳನ್ನು ತಡೆಯಲು ಹಾಗೂ ಇಳುವರಿ ಹೆಚ್ಚಿಸಲು ಪೋಷಕಾಂಶಗಳ ನಿರ್ವಹಣೆಯನ್ನು ಸಹ ಮಾಡುವಂತೆ ತಿಳಿಸಿದರು ಹಾಗೂ ನವ–ಭಾರತದ ನಿರ್ಮಾಣಕ್ಕೆ ಭ್ರಷ್ಟಾಚಾರ ನಿರ್ಮೂಲನೆ ಸಪ್ತಾಹದ ಅಂಗವಾಗಿ ಭ್ರಷ್ಟಾಚಾರ ನಿರ್ಮೂಲನೆಗೆ ಪ್ರತಿಜ್ಞೆಯನ್ನು ರೈತರಿಗೆ ಭೋಧಿಸಿದರು. ಈ ಕಾರ್ಯಕ್ರಮದಲ್ಲಿ ಹುಲ್ಲುಕಟ್ಟೆ ಗ್ರಾಮಸ್ಥರಾದ ಶ್ರೀ ರಾಜೇಶ್ವರರವರು, ಕರ್ನಾಟಕ ಕೃಷಿ ಬೆಲೆ ಆಯೋಗದ ರೈತರ ಆದಾಯ ಹಾಗೂ ಕಲ್ಯಾಣ ವೃದ್ಧಿ ಯೋಜನೆಯ ಸಂಶೋಧನಾ ಸಹಾಯಕಿಯಾದ ಕುಮಾರಿ ವೀಣಾ, ಕ್ಷೇತ್ರ ಸಹಾಯಕರಾದ ಶ್ರೀ. ಕರಿಯಪ್ಪ ಹಾಗೂ ಹುಲ್ಲುಕಟ್ಟೆ–ಕೊಪ್ಪಾದ ರೈತ ಮತ್ತು ರೈತ ಮಹಿಳೆಯರು ಭಾಗವಹಿಸಿದ್ದರು.



## ವಿಶ್ವ ಮಣ್ಣಿನ ದಿನಾಚರಣೆ 2018 ಕಾರ್ಯಕ್ರಮ



ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿ ಮತ್ತು ಕೃಷಿ ಇಲಾಖೆ, ತಿಪಟೂರು ಇವರ ಸಂಯುಕ್ತ ಆಶ್ರಯದಲ್ಲಿ ದಿನಾಂಕ: 05–12–2018 ರಂದು ಕೃಷಿ ಇಲಾಖೆ ಆವರಣ, ತಿಪಟೂರಿನಲ್ಲಿ ವಿಶ್ವ ಮಣ್ಣಿನ ದಿನಾಚರಣೆ 2018 ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮವನ್ನು ತಿಪಟೂರಿನ ಶಾಸಕರಾದ ಸನ್ಮಾನ್ಯ ಶ್ರೀ. ಬಿ.ಸಿ. ನಾಗೇಶ್‌ರವರು ಉದ್ಘಾಟಿಸಿ, ಸಾವಯವ ಕೃಷಿಯಿಂದ ಮಣ್ಣಿನ ಆರೋಗ್ಯ ಮತ್ತು ಫಲವತ್ತತೆಯನ್ನು ವೃದ್ಧಿಸುವ ಬಗ್ಗೆ ಮಾತನಾಡಿದರು. ಈ ಕಾರ್ಯಕ್ರಮಕ್ಕೆ ಮುಖ್ಯ ಅಥಿತಿಗಳಾಗಿ ಆಗಮಿಸಿದ್ದ ತಿಪಟೂರು ತಾಲ್ಲೂಕು ಪಂಚಾಯತಿ ಅಧ್ಯಕ್ಷರಾದ ಸನ್ಮಾನ್ಯ ಶ್ರೀ. ಎನ್. ಎಂ. ಸುರೇಶ್‌ರವರು ಮಣ್ಣಿನ ಆರೋಗ್ಯ ಮತ್ತು ಫಲವತ್ತತೆ ಬಗ್ಗೆ ತಿಳಿಸಿದರು. ಸಹಾಯಕ ಕೃಷಿ ನಿರ್ದೇಶಕರಾದ ಶ್ರೀ. ಬಿ.ಜಿ. ಜಯಪ್ಪರವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವ ಗಣ್ಯರಿಗೆ ಸ್ವಾಗತವನ್ನು ಕೋರಿದರು. ಈ ಕಾರ್ಯಕ್ರಮದ ಪ್ರಾಸ್ತಾವಿಕ ನುಡಿಯನ್ನು ಡಾ. ಕೆ.ಆರ್. ಶ್ರೀನಿವಾಸ್, ವಿಜ್ಞಾನಿಗಳು (ಸಸ್ಯ ರೋಗಶಾಸ್ತ್ರ), ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿ, ತಿಪಟೂರು ರವರು ಮಂಡಿಸಿದರು. ಡಾ. ಅನಿತಾ ಎಂ.ಎಸ್., ವಿಜ್ಞಾನಿಗಳು (ಮಣ್ಣು ವಿಜ್ಞಾನ ಮತ್ತು ಕೃಷಿ ರಸಾಯನ ಶಾಸ್ತ್ರ), ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿ, ತಿಪಟೂರು ರವರು ಮಣ್ಣಿನ ಆರೋಗ್ಯ ಮತ್ತು ಅದರ ಮಹತ್ವ, ಮಣ್ಣು ಮಾದರಿ ಸಂಗ್ರಹಣೆ ವಿಧಾನಗಳು, ಮಣ್ಣು ಆರೋಗ್ಯ ಚೀಟಿ ವಿತರಣೆಯ ಗುರಿ ಹಾಗೂ ಉದ್ದೇಶಗಳ ಬಗ್ಗೆ ತಿಳಿಸಿದರು. ಈ ಕಾರ್ಯಕ್ರಮದಲ್ಲಿ ರೈತ ಮತ್ತು ವಿಜ್ಞಾನಿಗಳ ಸಂವಾದ ನಡೆಸಿ ಹಾಗೂ ತಿಪಟೂರು ತಾಲ್ಲೂಕಿನ 50 ರೈತರಿಗೆ ಮಣ್ಣು ಆರೋಗ್ಯ ಚೀಟಿಗಳನ್ನು ವಿತರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಶ್ರೀಮತಿ ಭಾಗ್ಯಮ್ಮ ಮತ್ತು ಮಮತಾ, ಸದಸ್ಯರು, ಜಿಲ್ಲಾ ಪಂಚಾಯತಿ, ತಿಪಟೂರು, ಶ್ರೀ. ಕೆ.ಎಸ್. ಸದಾಶಿವಯ್ಯ, ಜಿಲ್ಲಾ ಪ್ರತಿನಿಧಿ, ಕೃಷಿಕಾ ಸಮಾಜ, ಶ್ರೀ. ಕೆ.ಎಸ್. ದೇವರಾಜು, ಅಧ್ಯಕ್ಷರು, ಕೃಷಿಕಾ ಸಮಾಜ, ಶ್ರೀ. ನಾಗರಾಜು ಮತ್ತು ಶ್ರೀಮತಿ. ಸುಕನ್ಯಾ, ಸದಸ್ಯರು, ಎ.ಪಿ.ಎಮ್.ಸಿ., ತಿಪಟೂರು, ಶ್ರೀಮತಿ. ಮೀನಾಕ್ಷಿ, ಸದಸ್ಯರು, ತಾಲ್ಲೂಕು ಪಂಚಾಯತಿ, ತಿಪಟೂರು ಮತ್ತು ಎಲ್ಲಾ ರೈತ ಮತ್ತು ರೈತ ಮಹಿಳೆಯರು ಭಾಗವಹಿಸಿದ್ದರು.



## ತೋಟಗಾರಿಕೆ ಸಸಿಗಳ ಉತ್ಪಾದನಾ ತಾಂತ್ರಿಕತೆಗಳಲ್ಲಿ ಯುವಕರಿಗೆ ಕೌಶಲ್ಯ ತರಬೇತಿ



ಐ.ಸಿ.ಎ.ಆರ್. – ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿ ಹಾಗೂ ಕೃಷಿ ವಿಸ್ತರಣೆ ನಿರ್ವಹಣೆ ರಾಷ್ಟ್ರೀಯ ಸಂಸ್ಥೆ (ಮ್ಯಾನೇಜ್), ಹೈದರಾಬಾದ್ ಇವರ ಸಂಯುಕ್ತಾಶ್ರಯದಲ್ಲಿ ದಿನಾಂಕ 10.12.2018 ರಂದು ಜರುಗಿದ "ತೆಂಗು ಮತ್ತು ಅಡಿಕೆಯ ಗುಣಮಟ್ಟದ ಸಸಿಗಳ ಉತ್ಪಾದನೆ", ದಿನಾಂಕ:11.12.2018 ರಂದು "ಹಣ್ಣಿನ ಕಸಿ ಗಿಡಗಳ ಉತ್ಪಾದನೆ" ಮತ್ತು ದಿನಾಂಕ:12.12.2018ರಂದು "ತರಕಾರಿ ಸಸಿಗಳ ಉತ್ಪಾದನಾ ತಂತ್ರಜ್ಞಾನಗಳ" ಬಗ್ಗೆ 15 ಜನ ಯುವ ಕೃಷಿಕರಿಗೆ ಕೃಷಿ ವಿಜ್ಞಾನ ಕೇಂದ್ರದಲ್ಲಿ ತರಬೇತಿ ನೀಡಲಾಯಿತು. ಕ್ಷೇತ್ರ ಭೇಟಿ ಮುಖಾಂತರ ಪ್ರಾಯೋಗಿಕವಾಗಿ ಈ ತರಬೇತಿಯನ್ನು ನೀಡಲಾಯಿತು.

## ರಾಗಿಯಲ್ಲಿ ಮೌಲ್ಯವರ್ಧನೆ ಮತ್ತು ಪ್ರಾಮುಖ್ಯತೆ ಬಗ್ಗೆ ತರಬೇತಿ ಕಾರ್ಯಕ್ರಮ



ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿ ಮತ್ತು ಕೃಷಿ ಇಲಾಖೆ, ತಿಪಟೂರು ಇವರ ಸಂಯುಕ್ತ ಆಶ್ರಯದಲ್ಲಿ ದಿನಾಂಕ 17.12.2018 ರಂದು ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿಯಲ್ಲಿ ರಾಗಿಯಲ್ಲಿ ಮೌಲ್ಯವರ್ಧನೆ ಮತ್ತು ಪ್ರಾಮುಖ್ಯತೆ ಬಗ್ಗೆ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮವನ್ನು ತಿಪಟೂರಿನ ಸಹಾಯಕ ಕೃಷಿ ನಿರ್ದೇಶಕರಾದ ಸನ್ಮಾನ್ಯ ಶ್ರೀ. ಜಯಪ್ಪರವರು ಉದ್ಘಾಟಿಸಿ ರಾಗಿಯಲ್ಲಿ ಮೌಲ್ಯವರ್ಧನೆಯ ಪ್ರಯೋಜನ ಮತ್ತು ರೈತರ ಆಧಾಯ ಹೆಚ್ಚಿಸುವಲ್ಲಿ ಮೌಲ್ಯವರ್ಧನೆಯ ಪಾತ್ರದ ಕುರಿತಾಗಿ ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿಯ ಗೃಹ ವಿಜ್ಞಾನಿಗಳಾದ ಡಾ. ಸ್ನೇಹಾ



ಶೀಗಿಹಳ್ಳಿರವರು ಪದ್ದತಿ ಪ್ರಾತ್ಯಕ್ಷಿತೆ ಮುಖಾಂತರ ರಾಗಿಯಿಂದ ಮಾಲ್ಟ್, ಹುರಿಹಿಟ್ಟು ಮತ್ತು ರಾಗಿ ಕೇಕ್ ತಯಾರಿಕೆ, ಮಾರುಕಟ್ಟೆ ಮತ್ತು ಉತ್ತಮ ಆರೋಗ್ಯಕ್ಕಾಗಿ ರಾಗಿಯ ಬಳಕೆಯ ಮಹತ್ವದ ಕುರಿತಾಗಿ ಪರಿಚಯಿಸಿದರು. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳಾದ ಡಾ. ಕೆ.ಆರ್. ಶ್ರೀನಿವಾಸ ರವರು ವಹಿಸಿಕೊಂಡಿದ್ದರು. ಹಾಗೆ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳಾದ ಡಾ. ನಾಗಪ್ಪ ದೇಸಾಯಿ, ಡಾ. ಎಂ.ಹೆಚ್. ಶಂಕರ ಮತ್ತು ಕೃಷಿ ಇಲಾಖೆಯ ಆತ್ಮ ಯೋಜನೆಯ ಶ್ರೀ. ಮಹೇಶ್ ರವರು ಉಪಸ್ಥಿತರಿದ್ದರು. ಈ ಕಾರ್ಯಕ್ರಮದಲ್ಲಿ ಸುಮಾರು 35 ರೈತ ಮಹಿಳೆಯರು ಭಾಗವಹಿಸಿದ್ದರು.


| | | |
|---|---|---|
| ಸಂಪಾದಕರು | : | ಡಾ. ವಿ. ಗೋವಿಂದ ಗೌಡ |
| ಸಂಪಾದಕೀಯ ಸದಸ್ಯರು | : | ಶ್ರೀ. ಎಂ. ಹೆಚ್. ಶಂಕರ<br>ಡಾ. ಕೆ.ಆರ್.ಶ್ರೀನಿವಾಸ<br>ಶ್ರೀ. ನಾಗಪ್ಪ ದೇಸಾಯಿ<br>ಡಾ. ಎಮ್.ಎಸ್. ಅನಿತಾ<br>ಡಾ. ಸ್ನೇಹಾ ಶೀಗಿಹಳ್ಳಿ<br>ಶ್ರೀಮತಿ. ಅರ್ಜುಮನ್ ಬಾನು |
| ಸಂಪಾದಕೀಯ ಸದಸ್ಯರು,<br>ಪುಟ ವಿನ್ಯಾಸ & ಅಕ್ಷರ ಜೋಡಣೆ | : | ಶ್ರೀ. ಪ್ರದೀಪ್ ಕುಮಾರ್ ಹೆಚ್ |

ಪ್ರಕಾಶಕರು:
ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು,
ಐ.ಸಿ.ಎ.ಆರ್ –ಕೃಷಿ ವಿಜ್ಞಾನ ಕೇಂದ್ರ, ಕೊನೇಹಳ್ಳಿ, ತಿಪಟೂರು, ತುಮಕೂರು ಜಿಲ್ಲೆ